# ಕರ್ನಾಟಕ ವಿಧಾನ ಪರಿಷತ್ತು

ಸದಸ್ಯರ ಹೆಸರು : ಶ್ರೀ. ರಾಜೇಂದ್ರ ರಾಜಣ್ಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ : 2672

ಉತ್ತರ ದಿನಾಂಕ : 25.03.2022

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ತುಮಕೂರು ಜಿಲ್ಲೆಯಲ್ಲಿ ಎಷ್ಟು ಶುದ್ಧ ಕುಡಿಯುವ ನೀರಿನ ಘಟಕಗಳಿವೆ; ದುರಸ್ಥಿಯಾಗದಿರುವ ಘಟಕಗಳೆಷ್ಟು; | ತುಮಕೂರು ಜಿಲ್ಲೆಯಲ್ಲಿ 1526 ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಅನುಷ್ಠಾನಗೊಳಿಸಲಾಗಿದ್ದು, ಈ ಪೈಕಿ 1455 ಘಟಕಗಳು ಕಾರ್ಯನಿರ್ವಹಿಸುತ್ತಿರುತ್ತವೆ. 55 ತಾತ್ಕಾಲಿಕವಾಗಿ ಸ್ಥಗಿತಗೊಂಡಿರುತ್ತವೆ ಹಾಗೂ 16 ಘಟಕಗಳು ದುರಸ್ಥಿಯಾಗದೇ ಇರುವ ಸ್ಥಿತಿಯಲ್ಲಿರುತ್ತವೆ. |
| ಆ) | ಶುದ್ಧ ಕುಡಿಯುವ ನೀರಿನ ಘಟಕಗಳು ಪದೇ ಪದೇ ಸ್ಥಗಿತಗೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಗಮನಕ್ಕೆ ಬಂದಿದೆ. |
| ಇ) | ಬಂದಿದ್ದಲ್ಲಿ, ದುರಸ್ಥಿಯಾಗದೇ ಸ್ಥಗಿತಗೊಂಡಿರುವ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ಸರಿಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ; | ಘಟಕಗಳನ್ನು ಸುಸ್ಥಿತಿಯಲ್ಲಿಡಲು ಈ ಕೆಳಗಿನಂತೆ ಕ್ರಮ ವಹಿಸಲಾಗುತ್ತಿದೆ.<br>• ಗ್ರಾಮ ಪಂಚಾಯಿತಿಗಳಿಗೆ ನಿರ್ವಹಣೆಗಾಗಿ ವಹಿಸಲಾದ ಘಟಕಗಳನ್ನು ಸುಸ್ಥಿತಿಯಲ್ಲಿಡಲು ಮಾಹೆಯಾನ ಪ್ರತಿ ಘಟಕಕ್ಕೆ ಇಲಾಖೆಯಿಂದ ರೂ.3000.00ಗಳ ಅನುದಾನ ಒದಗಿಸಲಾಗುತ್ತಿದೆ ಹಾಗೂ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿನ ಇತರೆ ಅನುದಾನಗಳನ್ನು ಬಳಸಿ ಘಟಕಗಳನ್ನು ಸುಸ್ಥಿತಿಯಲ್ಲಿಡಲು ಕಾಲಕಾಲಕ್ಕೆ ಸೂಚನೆಗಳನ್ನು ಸಹ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನೀಡಲಾಗುತ್ತಿದೆ.<br>• Defect Liability Period ಮುಗಿಯುವುದರೊಳಗೆ ಕಾರ್ಯನಿರ್ವಹಿಸದೇ ಇದ್ದಲ್ಲಿ, ಅಂತಹ ಘಟಕಗಳನ್ನು ಸ್ಥಾಪಿಸಿದ ಏಜೆನ್ಸಿರವರಿಗೆ ಕರಾರಿನಂತೆ ನೋಟೀಸ್‌ಗಳನ್ನು ನೀಡಿ ಘಟಕ ದುರಸ್ತಿ ಮಾಡಿಸಲಾಗುತ್ತಿದೆ ಮತ್ತು ವಿಫಲವಾದ ಗುತ್ತಿಗೆದಾರರ ಕರಾರನ್ನು Rescind ಮಾಡಲು ಕ್ರಮವಹಿಸಲಾಗುತ್ತಿದೆ. ಹಾಗೂ ಸದರಿ ಘಟಕಗಳನ್ನು ನಿಯಮಾನುಸಾರ ಇಲಾಖಾ ವತಿಯಿಂದ ಸರಿಪಡಿಸಿ ಕಾರ್ಯನಿರ್ವಹಿಸುವಂತೆ ಕ್ರಮಜರುಗಿಸಲಾಗುತ್ತಿದೆ. ವಾರ್ಷಿಕ ಕಾರ್ಯಾಚರಣೆ ಮತ್ತು ನಿರ್ವಹಣೆ ನಿರ್ವಹಿಸುತ್ತಿರುವ ಗುತ್ತಿಗೆದಾರರು ಘಟಕಗಳನ್ನು ಸುಸ್ಥಿತಿಯಲ್ಲಿಡಲು ವೈಫಲ್ಯರಾದಲ್ಲಿ ನಿಯಮಾನುಸಾರ ನೋಟೀಸ್‌ಗಳನ್ನು ನೀಡಿ ಗುತ್ತಿಗೆದಾರರ ಕಾಸ್ಟ್ ಅಂಡ್ ರಿಸ್ಕ್ ಆಧಾರದಲ್ಲಿ ಗುತ್ತಿಗೆ ರದ್ದುಪಡಿಸಿ ಇಲಾಖಾ ವತಿಯಿಂದ ಸುಸ್ಥಿತಿಗೆ ತರಲು ಕ್ರಮವಹಿಸಲಾಗುತ್ತಿದೆ. |

| | | |
|---|---|---|
| ಈ) | ಶುದ್ಧ ಕುಡಿಯುವ ನೀರಿನ ಘಟಕಗಳನ್ನು ನಿರ್ವಹಣೆ ಮಾಡುವ ಜವಾಬ್ದಾರಿ ಯಾರಿಗೆ ವಹಿಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು) | ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆಗೆ ಟೆಂಡರ್ ಆಹ್ವಾನಿಸಿ ಅರ್ಹ ಗುತ್ತಿಗೆದಾರರಿಗೆ 5 ವರ್ಷಗಳ ಕಾರ್ಯಾಚರಣೆ ಮತ್ತು ನಿರ್ವಹಣೆ ಸೇರಿಸಿ ನೇಮಿಸಲಾಗಿರುತ್ತದೆ. ಕಾರ್ಯಾಚರಣೆ ಮತ್ತು ನಿರ್ವಹಣೆ ಅವಧಿ ಪೂರ್ಣಗೊಂಡ ನಂತರ ಪುನಃ ಟೆಂಡರ್ ಕರೆದು ಸೂಕ್ತ ಕ್ರಮ ವಹಿಸಲಾಗುತ್ತಿದೆ.<br><br>ಗ್ರಾಮ ಪಂಚಾಯಿತಿಗಳು ಇಚ್ಛಿಸಿದ್ದಲ್ಲಿ ಘಟಕಗಳನ್ನು ಹಸ್ತಾಂತರಿಸಿ ಸುಸ್ಥಿತಿಯಲ್ಲಿಡಲು ಅಗತ್ಯ ಕ್ರಮ ಜರುಗಿಸಲಾಗುತ್ತಿದೆ. |

ಸಂ:ಗ್ರಾಕುನೀ&ನೈಇ 202 ಗ್ರಾನೀಸ(4)2022

(ಕೆ.ಎಸ್. ಈಶ್ವರಪ್ಪ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು